# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:07ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

## 02. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ಬೆಂಗಳೂರಿನ ಐ.ಟಿ.ಐ. ಕಾರ್ಖಾನೆಯಲ್ಲಿ ಸುಮಾರು 30 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ 80 ಕಾರ್ಮಿಕರನ್ನು ಕಾನೂನು ಬಾಹಿರವಾಗಿ ಸೇವೆಯಿಂದ ವಜಾ ಮಾಡಿರುವ ಕುರಿತು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

02. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ ಬೆಂಗಳೂರಿನ ನಾಗರೀಕರ ನೆಮ್ಮದಿ ಕೆಡಿಸಿರುವ ವಿಷಯದ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

03. **ಶ್ರೀ ಬಿ.ಎಂ.ಫಾರೂಖ್** ಅವರು ಜಲಸಂಪನ್ಮೂಲ ಇಲಾಖೆಯ ವಿವಿಧ ನಿಗಮಗಳಲ್ಲಿ ಕೈಗೊಂಡ ಕಾಮಗಾರಿಗಳ ಬಿಲ್ಲಿನ ಮೊತ್ತವನ್ನು ಪಾವತಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

04. **ಶ್ರೀ ರಾಜೇಂದ್ರ ರಾಜಣ್ಣ** ಅವರು ಬಯಲು ಸೀಮೆಯ ಏಳು ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಎತ್ತಿನ ಹೊಳೆ ಯೋಜನೆಯ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

05. **ಶ್ರೀ ಸುನೀಲ್ ವಲ್ಯಾಪುರ್** ಅವರು ಕರ್ನಾಟಕ ಭೋವಿ ವಡ್ಡರ ನಿಗಮವು ಸ್ಥಾಪನೆಯಾದಾಗಿನಿಂದ ರೂಪಿಸಿರುವ ಯೋಜನೆಗಳು ಹಾಗೂ ಸದರಿ ಯೋಜನೆಗಳಿಗೆ ಪ್ರತಿ ವರ್ಷ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಸದ್ಭಳಕೆ ಹಾಗೂ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ಮತ್ತು ನೇಮಕಾತಿ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 03. ನಿಯಮ 330ರ ಮೇರೆಗೆ

01. **ಶ್ರೀ ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಕೆ.ಹರೀಶ್‌ಕುಮಾರ್** ಅವರುಗಳು ರಾಜ್ಯದಲ್ಲಿ ಆರ್ಥಿಕ ಸಂಕಷ್ಟದಲ್ಲಿರುವ ಹೊಲಿಗೆ ವೃತ್ತಿಯಲ್ಲಿ ತೊಡಗಿರುವ ಕಸಬುದಾರರಿಗೆ ವೃತ್ತಿ ಸ್ವಾವಲಂಬನೆ, ಸ್ವಯಂ ಉದ್ಯೋಗ, ಆರ್ಥಿಕ ಪ್ರೋತ್ಸಾಹಗಳನ್ನು ಒದಗಿಸುವ ನಿಟ್ಟಿನಲ್ಲಿ ತಮಿಳುನಾಡು ಮಾದರಿಯಂತೆ ರಾಜ್ಯದಲ್ಲಿಯೂ ಅಭಿವೃದ್ಧಿ ನಿಗಮವೊಂದನ್ನು ರಚಿಸುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಯು.ಬಿ. ವೆಂಕಟೇಶ್** ಅವರು ರಾಜ್ಯದಲ್ಲಿ ಬಿಟ್ ಕಾಯಿನ್ ಹಗರಣ ಕುರಿತು ಆಗಿರುವ ತನಿಖಾ ಪ್ರಗತಿ ಹಾಗೂ ಅದರ ಬೆಳವಣಿಗೆಗಳ ವಿಷಯದ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ;- ಮರಿತಿಬ್ಬೇಗೌಡ, ಮೋಹನ್ ಕುಮಾರ್ ಕೊಂಡಜ್ಜಿ, ಪಿ.ಆರ್.ರಮೇಶ್ ಹಾಗೂ ಅರುಣ ಶಹಾಪುರ** ಅವರುಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಕೆ.ಜಿ.ಐ.ಡಿ., ಇ.ಜಿ.ಐ.ಎಸ್, ಡಿ.ಸಿ.ಆರ್.ಜಿ, ಜ್ಯೋತಿ ಸಂಜೀವಿನಿ ಹಾಗೂ ಇತರ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀಯುತರುಗಳಾದ;- ಶಶೀಲ್ ಜಿ. ನಮೋಶಿ, ಡಾ: ವೈ.ಎ. ನಾರಾಯಣಸ್ವಾಮಿ, ಎಸ್.ರವಿ, ಅರುಣ ಶಹಾಪುರ, ಎಸ್.ವಿ. ಸಂಕನೂರ ಹಾಗೂ ಅ.ದೇವೇಗೌಡ** ಅವರುಗಳು ಇತ್ತೀಚಿಗೆ ರಾಜ್ಯಾದ್ಯಂತ ಹೆಚ್ಚುತ್ತಿರುವ ಗಾಂಜಾ ಮತ್ತು ಡ್ರಗ್ಸ್‌ಗಳ ಮಾರಾಟದಿಂದ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಮಾದಕ ವ್ಯಸನಿಗಳಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

05. **ಶ್ರೀ ಡಿ.ಎಸ್.ಅರುಣ್** ಅವರು ಟ್ರೇಡ್ ಪರವಾನಗಿ ಶುಲ್ಕ ವಸೂಲಾತಿಯಲ್ಲಿ ಗೊಂದಲಗಳಿರುವ ಕುರಿತು ಪ್ರಸ್ತಾಪಿಸುವುದು.

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ;-**<br>**ಕೆ.ಎ. ತಿಪ್ಪೇಸ್ವಾಮಿ, ಮರಿತಿಬ್ಬೇಗೌಡ ಮತ್ತು ಕೆ.ಟಿ. ಶ್ರೀಕಂಠೇಗೌಡ ಅವರುಗಳು** | ಭಾರತೀಯ ಆಡಳಿತ ಸೇವಾ ನಿಯಮಗಳು (ವೃಂದ) 1954ಗಳಿಗೆ ಪ್ರಸ್ತಾಪಿಸಿರುವ ತಿದ್ದುಪಡಿಯಲ್ಲಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳ ಸಹಮತಿ ಇಲ್ಲದಿದ್ದರೂ ಅಧಿಕಾರಿಗಳನ್ನು ಹುದ್ದೆಗಳಿಂದ ಬಿಡುಗಡೆ ಮಾಡಿ ಕೇಂದ್ರ ಸರ್ಕಾರದ ಸೇವೆ ಸಲ್ಲಿಸಬೇಕೆಂಬ ನಿಬಂಧನೆ ತಂದಿರುವ ಕುರಿತು |

## 05. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**